ಸೂಚಿಸ ಲಾಗಿದೆ. ಇದರಿಂದ ರೋಗದ ಪರಿಸ್ಥಿತಿಯು ಹತೋಟಿಯ ಲ್ಲಿರುತ್ತದೆ.

ಅಲ್ಪಸಂಖ್ಯಾತರ ಸಮುದಾಯ ಭವನ ನಿರ್ಮಾಣ

ಶ್ರೀ ರಮೇಶ್ ಬಂಡಿಸಿದ್ದೇಗೌಡ ಎ.ಬಿ. (ಶ್ರೀರಂಗಪಟ್ಟಣ), ವಿ.ಸ. ಸದಸ್ಯರು : ಮಾನ್ಯ ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶ್ರೀರಂಗಪಟ್ಟಣ ಕ್ಷೇತ್ರವು ಐತಿಹಾಸಿಕ ಹಾಗೂ ಪಾರಂಪರಿಕ ಸ್ಥಳವಾಗಿದ್ದು, ಮಂಡ್ಯ ಜಿಲ್ಲೆಯಲ್ಲಿಯೇ ಅತಿ ಹೆಚ್ಚು ಮುಸಲ್ಮಾನ್ ಬಾಂಧವರು ಈ ಸ್ಥಳದಲ್ಲಿ ನೆಲೆಸಿದ್ದು ಜನಾಂಗದವರ ಉಪಯೋಗಕ್ಕಾಗಿ ಒಂದು ಸಮುದಾಯ ಭವನ ಇಲ್ಲದಿರುವುದರಿಂದ ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಸಮುದಾಯ ಭವನ ನಿರ್ಮಾಣ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮವೇನು;

ಇ) ಈಗಾಗಲೇ ಜಮೀನು ನೀಡಲಾಗಿದ್ದರೂ ಸಹ ಈವರೆಗೂ ಸಮುದಾಯ ಭವನ ನಿರ್ಮಾಣ ಕಾಮಗಾರಿ ಪ್ರಾರಂಭವಾಗದಿರಲು ಕಾರಣವೇನು?

ಈ) ಇದಕ್ಕಾಗಿ ಒದಗಿಸಲಾಗಿರುವ ಅನುದಾನ ಎಷ್ಟು; (ವಿವರ ನೀಡುವುದು)?

ಪ್ರೊ. ಡಾ. ಮುಮ್ತಾಜ್ ಅಲಿ ಖಾನ್, (ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು) :

ಅ) ಹೌದು

ಆ) ಸ್ಥಳೀಯ ಅಲ್ಪಸಂಖ್ಯಾತರ ಸಮುದಾಯದವರಿಗೆ ತಿಳಿಸಿದರೂ ಯಾವುದೇ ಪ್ರಸ್ತಾವನೆ ಬರದೆ ಇರುವ ಕಾರಣ ಪ್ರಸ್ತಾವನೆ ಸಲ್ಲಿಸುವಂತೆ ಜಿಲ್ಲಾ ಹಿಂದುಳಿದ ವರ್ಗಗಳ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯವರಿಗೆ ಸೂಚನೆ ನೀಡಲಾಗಿದೆ. ಪ್ರಸ್ತಾವನೆ ಬಂದ ತಕ್ಷಣ ಕ್ರಮ ಕೈಗೊಳ್ಳಲಾಗುವುದು.

ಇ) ಈ ಬಗ್ಗೆ ಯಾವುದೇ ಪ್ರಸ್ತಾವನೆ ಬಂದಿರುವುದಿಲ್ಲ

ಈ) ಅನ್ವಯಿಸುವುದಿಲ್ಲ